ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/26/ಕಿರಾಚೆಪು/ನವೀ/2021-22/ವಿವೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:10.01.2022.

## ಸುತ್ತೋಲೆ

ವಿಷಯ: 2021-22 ನೇ ಸಾಲಿಗೆ ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ ವಿದ್ಯಾರ್ಥಿವೇತನ (ನವೀಕರಣ) ಮಂಜೂರಾತಿಗಾಗಿ ಅಗತ್ಯ ಮಾಹಿತಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅನುದಾನ ಬಿಡುಗಡೆ ಆದೇಶ ಸಂಖ್ಯೆ:ಇಡಿ/65/ಹೆಚ್‌ಪಿಸಿ/ 2021, ದಿ:17.04.202.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ 2021-22ನೇ ಸಾಲಿಗೆ ವಿವಿಧ ವಿದ್ಯಾರ್ಥಿ ವೇತನಗಳಿಗೆ ಅನುದಾನ ಹಂಚಿಕೆಯಾಗಿದ್ದು, ಸದರಿ ಅನುದಾನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ (ನವೀಕರಣ) ವಿದ್ಯಾರ್ಥಿ ವೇತನಗಳನ್ನು ಸರ್ಕಾರಿ/ ಅನುದಾನಿತ ಖಾಸಗಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವೃತ್ತಿಪರ ಶಿಕ್ಷಣ ಕೋರ್ಸ್‌ಗಳಾದ ಇಂಜಿನಿಯರಿಂಗ್/ಮೆಡಿಕಲ್/ ಅಗ್ರಿಕಲ್ಚರ್/ ಹಾರ್ಟಿಕಲ್ಚರ್/ ಫಿಶರಿಸ್, ನರ್ಸಿಂಗ್ ಹಾಗೂ ಇತರೆ ಉನ್ನತ ಶಿಕ್ಷಣ ಕೋರ್ಸ್‌ಗಳಿಗೆ ಸಿ.ಇ.ಟಿ ಮುಖಾಂತರ ಪ್ರವೇಶ ಪಡೆದುಕೊಂಡಿರುವ ಬಡತನ ರೇಖೆಗಿಂತ ಕೆಳಗಿರುವ ಹಾಗೂ ಬಿ.ಪಿ.ಎಲ್‌ಕಾರ್ಡ್ ಹೊಂದಿರುವ ಕುಟುಂಬದ ಪ್ರತಿಭಾವಂತ ವಿದ್ಯಾರ್ಥಿನಿಯರು ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ ಯೋಜನೆಯಡಿ ಅವರುಗಳು ಪಾವತಿಸಿರುವ ಸರ್ಕಾರಿ ಶುಲ್ಕಗಳನ್ನು ಮರುಪಾವತಿ ಮಾಡಲಾಗುತ್ತದೆ.

ಈ ಹಿನ್ನೆಲೆಯಲ್ಲಿ 2018-19, 2019-20 ಮತ್ತು 2020-21ನೇ ಶೈಕ್ಷಣಿಕ ಸಾಲಿನಲ್ಲಿ ಸಿ.ಇ.ಟಿ. ಮುಖಾಂತರ ವೃತ್ತಿಪರ ಶಿಕ್ಷಣ ಕೋರ್ಸ್‌ಗೆ ಪ್ರವೇಶ ಪಡೆದು ಕಿತ್ತೂರು ರಾಣಿ ಚೆನ್ನಮ್ಮ ನೂತನ ಪುರಸ್ಕಾರ ಪಡೆದ ವಿದ್ಯಾರ್ಥಿನಿಯರಿಗೆ 2021-22ನೇ ಸಾಲಿಗೆ ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರದ ನವೀಕರಣ ಮಂಜೂರು ಮಾಡುವ ಸಂಬಂಧ ಹಿಂದಿನ ಪರೀಕ್ಷೆಯ ಎಲ್ಲಾ ಸೆಮಿಸ್ಟರ್‌ಗಳಲ್ಲಿ ವಿದ್ಯಾರ್ಥಿನಿಯರು ಉತ್ತೀರ್ಣರಾಗಿರುವ ಷರತ್ತಿಗೊಳಪಟ್ಟಂತೆ ಮಂಜೂರಾತಿ ನೀಡಬೇಕಾಗಿರುವುದರಿಂದ ತಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಫಲಾನುಭವಿ ವಿದ್ಯಾರ್ಥಿನಿಯರ ಮಾಹಿತಿಯನ್ನು ಈ ಪತ್ರದ ಹಿಂಭಾಗದಲ್ಲಿ ತಿಳಿಸಲಾಗಿದ್ದು, ಅಂತಹ ವಿದ್ಯಾರ್ಥಿನಿಯರಿಗೆ ಸಂಬಂಧಿಸಿದಂತೆ ಕೆಳಕಂಡ ಮಾಹಿತಿಯನ್ನು ದಾಖಲಾತಿಗಳೊಂದಿಗೆ ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ (ದಿನಾಂಕ:19.01.2022) ಸಲ್ಲಿಸಬೇಕು ಹಾಗೂ ಪೂರ್ಣ ಮಾಹಿತಿ ಸಲ್ಲಿಸಿದ್ದಲ್ಲಿ ಮಾತ್ರ ಅಂತಹ ವಿದ್ಯಾರ್ಥಿನಿಯರ ಅರ್ಜಿಗಳನ್ನು ಪುರಸ್ಕಾರಕ್ಕೆ ಪರಿಗಣಿಸಲಾಗುವುದು. ಅಪೂರ್ಣ ಮಾಹಿತಿ ಸಲ್ಲಿಸಿದ ವಿದ್ಯಾರ್ಥಿನಿಯರನ್ನು ವಿದ್ಯಾರ್ಥಿ ವೇತನದಿಂದ ತಿರಸ್ಕರಿಸಲಾಗುವುದು ಎಂಬ ಮಾಹಿತಿಯನ್ನು ಈ ಮೂಲಕ ತಿಳಿಸಲಾಗಿದೆ.

| | |
|---|---|
| 1 | 2021-22ನೇ ಸಾಲಿನಲ್ಲಿ ವಿದ್ಯಾರ್ಥಿನಿಯರು ಕಾಲೇಜಿಗೆ ಪ್ರವೇಶ ಪಡೆದ ವ್ಯಾಸಂಗ ಪ್ರಮಾಣಪತ್ರ ಹಾಗೂ ಬೋದನಾ ಶುಲ್ಕ ಪಾವತಿ ರಸೀದಿ ಲಗತ್ತಿಸಬೇಕು |
| 2 | **2018-19, 2019-20 ಮತ್ತು 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ ಪಡೆದ ವಿದ್ಯಾರ್ಥಿನಿಯರು 2021-22ನೇ ಸಾಲಿನಲ್ಲಿ ಕಾಲೇಜಿಗೆ ಪಾವತಿಸಿದ ಶುಲ್ಕ ಪಾವತಿ (ಬೋಧನಾ ಶುಲ್ಕ) ರಸೀದಿಯ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯ ಜೊತೆ ಲಗತ್ತಿಸಿರಬೇಕು ಇಲ್ಲದಿದ್ದಲ್ಲಿ 2021-22ನೇ ಸಾಲಿನ ನವೀಕರಣ ಮಂಜೂರಾತಿಗೆ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.** |
| 3 | ವಿದ್ಯಾರ್ಥಿನಿಯರು ಹಿಂದಿನ ಎಲ್ಲಾ ಸೆಮಿಸ್ಟರ್‌ವಾರು ಪರೀಕ್ಷೆಗಳ ದೃಢೀಕೃತ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ. (ಕಾಲೇಜು ಪ್ರಾಂಶುಪಾಲರಿಂದ ದೃಢೀಕರಿಸಿರಬೇಕು) |
| 3 | ವಿದ್ಯಾರ್ಥಿನಿಯರ ಆಧಾರ್ ಕಾರ್ಡ್ ಪ್ರತಿ. (ಕಾಲೇಜು ಪ್ರಾಂಶುಪಾಲರಿಂದ ದೃಢೀಕರಿಸಿರಬೇಕು) |
| 4 | ವಿದ್ಯಾರ್ಥಿನಿಯರ ಬ್ಯಾಂಕ್ ಪಾಸ್ ಪುಸ್ತಕದ ಪ್ರಸ್ತುತ ಚಾಲ್ತಿಯಲ್ಲಿರುವ ಜೆರಾಕ್ಸ್ ಪ್ರತಿ. (ಕಾಲೇಜು ಪ್ರಾಂಶುಪಾಲರಿಂದ ದೃಢೀಕರಿಸಿರಬೇಕು) |

| | |
|---|---|
| 5 | ಪೋಷಕರ/ವಿದ್ಯಾರ್ಥಿನಿಯ ದೂರವಾಣಿ ಸಂಖ್ಯೆ |
| 6 | ವಿದ್ಯಾರ್ಥಿನಿಯು 2021-22 ನೇ ಸಾಲಿಗೆ ವಿವಿಧ ಇಲಾಖೆಗಳು ನೀಡುವ ವಿದ್ಯಾರ್ಥಿವೇತನಕ್ಕೆ ಎಸ್.ಎಸ್.ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳ ಅರ್ಜಿಯನ್ನು ಈ ಪುರಸ್ಕಾರದ ಮಂಜೂರಾತಿಗೆ ಪರಿಗಣಿಸುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಲಾಗಿದೆ. |

ಈ ಮೇಲ್ಕಂಡ ದಾಖಲಾತಿ ಪ್ರತಿಗಳನ್ನು ಫಲಿತಾಂಶ ಪ್ರಕಟಗೊಂಡ ಕೂಡಲೇ ಕಾಲೇಜಿನ ಮುಖಾಂತರ ವಿದ್ಯಾರ್ಥಿಗಳ ವಿವರಗಳೊಂದಿಗೆ ಹಾರ್ಡ್ ಪ್ರತಿಯನ್ನು ಕಡ್ಡಾಯವಾಗಿ ದಿನಾಂಕ:19-01-2022 ರೊಳಗೆ ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ
ಬೆಂಗಳೂರು.

ಇವರಿಗೆ:

ಡೀನ್/ಪ್ರಾಂಶುಪಾಲರು ಭಾರತ ಸರ್ಕಾರದ ಸೇವೆಯಲ್ಲಿ Adichunchana giri Inst of Tech, Chikamagalore - 577102

------------

------------

------------

ಪ್ರತಿಯನ್ನು :

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
3. ಡೀನ್, ಕೃಷಿ ವಿಶ್ವವಿದ್ಯಾಲಯ ಜಿ.ಕೆ.ವಿ.ಕೆ ಬೆಂಗಳೂರು.
4. ಡೀನ್, ಕೃಷಿ ವಿಶ್ವವಿದ್ಯಾಲಯ ಬಾಗಲಕೋಟೆ.
5. ಡೀನ್, ಕೃಷಿ ವಿಶ್ವವಿದ್ಯಾಲಯ ರಾಯಚೂರು.
6. ಡೀನ್, ಕೃಷಿ ವಿಶ್ವವಿದ್ಯಾಲಯ ಹಾಸನ.
7. ಡೀನ್, ಕೃಷಿ ವಿಶ್ವವಿದ್ಯಾಲಯ ಬೀದರ್.
8. ಕಛೇರಿ ಪ್ರತಿ.

ಆಯುಕ್ತರ ಕಛೇರಿ
ಕಾಲೇಜು ಶಿಕ್ಷಣ ಇಲಾಖೆ
ಬೆಂಗಳೂರು - 560 001

| | Student Name | Class | Comb |
|---|---|---|---|
| 1 | Bhoomika - J | IV BE | EAC |
| 2 | Fathima | III BE | C Sci |
| 3 | Soujanya - C - P | III BE | Cm Sci |
| 4 | Sushmitha. A - S | III BE | EAC |
| 5 | Spoorthi. D.N | II BE | E Eng |
| 6 | Lavanya - K. J | BE IV | EAC |